ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ಜುಲೈ 17, 2015

## ಮಾಜಿ ಸಚಿವ ಪೇಪರ್ ಮುನಿಯಪ್ಪ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

**ಬೆಂಗಳೂರು, ಜುಲೈ 17:**

ಅವಿಭಜಿತ ಕೋಲಾರ ಜಿಲ್ಲೆಯಲ್ಲಿ "ಪೇಪರ್" ಮುನಿಯಪ್ಪ ಎಂದೇ ಖ್ಯಾತರಾಗಿದ್ದ ಮಾಜಿ ಸಚಿವ ಶ್ರೀ ಕೆ. ಎಂ. ಮುನಿಯಪ್ಪ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಕೃಷಿಕ ಕುಟುಂಬದಲ್ಲಿ ಜನಿಸಿ, ಪತ್ರಕರ್ತನಾಗಿ ಬೆಳೆದು ಜನಪ್ರಿಯತೆಯ ಉತ್ತುಂಗಕ್ಕೇರಿ ಚಿಕ್ಕಬಳ್ಳಾಪುರ ಕ್ಷೇತ್ರದಿಂದ ಎಂಟನೇ ವಿಧಾನ ಸಭೆ ಪ್ರವೇಶಿಸಿ, ರಾಮಕೃಷ್ಣ ಹೆಗಡೆ ಅವರ ಸಚಿವ ಸಂಪುಟದಲ್ಲಿ ರೇಷ್ಮೆ ಸಚಿವರಾಗಿದ್ದ ಶ್ರೀ ಕೆ. ಎಂ. ಮುನಿಯಪ್ಪ ಅವರ ಜೀವನದ ಯಶೋಗಾಥೆ ನೂಲಿನಿಂದ ವಸ್ತ್ರವಾದ ರೇಷ್ಮೆಯ ದಂತ ಕಥೆಯಂತಾಗಿತ್ತು ಎಂದು ಶ್ರೀ ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಶ್ರೀ ಮುನಿಯಪ್ಪ ಅವರ ಆತ್ಮಕ್ಕೆ ಶಾಂತಿ ದೊರೆಯಲಿ ಹಾಗೂ ಅವರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ಲಭಿಸಲಿ ಎಂದು ಮುಖ್ಯಮಂತ್ರಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

**ಅಂತಿಮ ನಮನ**

ನಗರದಲ್ಲಿರುವ ಶ್ರೀ ಮುನಿಯಪ್ಪ ಅವರ ಮನೆಗೆ ಭೇಟಿ ಇತ್ತ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಮೃತರ ಪಾರ್ಥಿವದ ಶರೀರದ ಮೇಲೆ ಪುಷ್ಪಗುಚ್ಛ ಇರಿಸಿ ಅಂತಿಮ ನಮನ ಸಲ್ಲಿಸಿದರು.

*********

ಡಿ ಪಿ ಎಂ